RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – IV-A | ಬೆಂಗಳೂರು, ಬುಧವಾರ, ಜುಲೈ ೩೧, ೨೦೧೩ (ಶ್ರಾವಣ ೯, ಶಕ ವರ್ಷ ೧೯೩೫) | ನಂ.೧೦೦೨ |
|---|---|---|
| Part – IV-A | Bangalore, Wednesday, July 31, 2013 (Shravana 9, Shaka Varsha 1935) | No. 1002 |


## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವಾಲಯ

## ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 37 ಶಾಸನ 2013, ಬೆಂಗಳೂರು, ದಿನಾಂಕ: 31–07–2013**

ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ, 2013ಕ್ಕೆ 2013ರ ಜುಲೈ ತಿಂಗಳ ಮುವತ್ತೊಂದನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ: 54 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2013ರ ಕರ್ನಾಟಕ ಅಧಿನಿಯಮ ಸಂಖ್ಯೆ 54**

(2013ರ ಜುಲೈ ಮುವತ್ತೊಂದನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ಎರಡನೇ ತಿದ್ದುಪಡಿ) ಅಧಿನಿಯಮ, 2013**

(2013ರ ಜುಲೈ ಮುವತ್ತೊಂದನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ, 2003ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ, 2003ನ್ನು (2004ರ ಕರ್ನಾಟಕ ಅಧಿನಿಯಮ 32) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ನಾಲ್ಕನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು:–

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ಎರಡನೇ ತಿದ್ದುಪಡಿ) ಅಧಿನಿಯಮ, 2013 ಎಂದು ಕರೆಯತಕ್ಕದ್ದು.

(2) ಇದು 2013ರ ಆಗಸ್ಟ್ ಒಂದನೇ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. 40ನೇ ಪ್ರಕರಣದ ತಿದ್ದುಪಡಿ.–** ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ, 2003ರ (2004ರ ಕರ್ನಾಟಕ ಅಧಿನಿಯಮ 32) (ಇಲ್ಲಿ ಇನ್ನು ಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 40ನೇ ಪ್ರಕರಣದ (1) ಮತ್ತು (2)ನೇ ಉಪಪ್ರಕರಣಗಳಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು ಮತ್ತು 2005ರ ಏಪ್ರಿಲ್ ಮೊದಲನೇ ದಿನದಿಂದ ಜಾರಿಗೆ ಬರುವಂತೆ ಪ್ರತಿಯೋಜಿಸಲಾಗಿದೆಯೆಂದು ಭಾವಿಸತಕ್ಕದ್ದು, ಎಂದರೆ:–